ಕರ್ನಾಟಕ ಸರ್ಕಾರ

ಜಂಟಿ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಮಧ್ಯಾಹ್ನ ಉಪಹಾರ ಯೋಜನೆ, ಕೆ.ಜಿ.ರಸ್ತೆ, ಬೆಂಗಳೂರು-09

ದೂ.ಸಂ:22242943, ಫ್ಯಾಕ್ಸ್ :22271998, ಇ-ಮೇಲ್: jd_mms@yahoo.co.in

ಸಂಖ್ಯೆ:ಎಂ3/ಮ.ಉ.ಯೋ./ಅ.ಸಿ.ಸ& ಬೇ./07/2017-18 ದಿನಾಂಕ: 28-06-2018

# ಸುತ್ತೋಲೆ

**ವಿಷಯ:** ಮಧ್ಯಾಹ್ನ ಉಪಹಾರ ಯೋಜನೆಯಡಿಯಲ್ಲಿ ಶಾಲೆಗಳಲ್ಲಿ ಕೆಲಸ ಮಾಡುತ್ತಿರುವ ಅಡುಗೆ ಸಿಬ್ಬಂದಿಗಳ ಸಮಸ್ಯೆಗಳ ಬಗ್ಗೆ ಅಗತ್ಯ ಕ್ರಮವಹಿಸುವ ಕುರಿತು.

**ಉಲ್ಲೇಖ:** 1.ದಿನಾಂಕ: 14-9-2017 ರಂದು ಸನ್ಮಾನ್ಯ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ಹಾಗೂ ದಿನಾಂಕ: 09-02-2018 ರಂದು ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭಾ ನಡವಳಿಯನ್ವಯ.

2.ಈ ಕಛೇರಿ ಸುತ್ತೋಲೆ ಸಮಸಂಖ್ಯೆ ದಿನಾಂಕ: 24-01-2018.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಅಡುಗೆ ಸಿಬ್ಬಂದಿಗಳ ಸಮಸ್ಯೆಗಳ ಪರಿಹಾರದ ಬಗ್ಗೆ ಕರ್ನಾಟಕ ರಾಜ್ಯ ಅಕ್ಷರ ದಾಸೋಹ ನೌಕರರ ಸಂಘ (ಸಿ.ಐ.ಟಿ.ಯು) ಹಾಗೂ ಕರ್ನಾಟಕ ರಾಜ್ಯ ಅಕ್ಷರ ದಾಸೋಹ ಬಿಸಿಊಟ ತಯಾರಕರ ಫೆಡರೇಷನ್ (ಎ.ಐ.ಟಿ.ಯು.ಸಿ) ಸಂಘಟನೆಗಳು ಹಲವಾರು ಬಾರಿ ಹೋರಾಟ ನಡೆಸಿರುತ್ತಾರೆ. ಸನ್ಮಾನ್ಯ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ 14-09-2017 ರಂದು ನಡೆದ ಸಭೆಯಲ್ಲಿ ಅಡುಗೆ ಸಿಬ್ಬಂದಿಯವರ ಸಮಸ್ಯೆ ಮತ್ತು ಬೇಡಿಕೆಗಳ ಬಗ್ಗೆ ಚರ್ಚಿಸಿ, ಕೈಗೊಂಡ ತೀರ್ಮಾನಗಳ ಪ್ರಕಾರ ಉಲ್ಲೇಖ-2ರಲ್ಲಿ ಸೂಕ್ತ ಕ್ರಮವಹಿಸಲು ಸುತ್ತೋಲೆಯನ್ನು ಹೊರಡಿಸಲಾಗಿರುತ್ತದೆ. ಆದಾಗ್ಯೂ ಈ ಸಮಸ್ಯೆಗಳನ್ನು ಪರಿಹರಿಸುವ ಕುರಿತು ಪರಿಣಾಮಕಾರಿಯಾಗಿ ಯಾವುದೇ ಕ್ರಮಗಳನ್ನು ಜಿಲ್ಲಾ/ತಾಲ್ಲೂಕು/ಕ್ಲಸ್ಟರ್/ಶಾಲಾ ಹಂತದಲ್ಲಿ ಕೈಗೊಂಡಿರುವುದಿಲ್ಲವೆಂದು ಸಂಘದವರು ಹಾಗೂ ಸಾರ್ವಜನಿಕರು ದೂರವಾಣಿ ಹಾಗೂ ಪತ್ರಗಳ ಮೂಲಕ ದೂರು ಸಲ್ಲಿಸಿರುತ್ತಾರೆ. ಈ ಹಿನ್ನಲೆಯಲ್ಲಿ ಮತ್ತೊಮ್ಮೆ ಸುತ್ತೋಲೆ ಕಳುಹಿಸಲಾಗುತ್ತಿದ್ದು, ಅಗತ್ಯವಾಗಿ ಈ ಕೆಳಕಂಡಂತೆ ಕ್ರಮವಹಿಸಲು ಸೂಚಿಸಿದೆ.

1. **ಅಡುಗೆ ಸಿಬ್ಬಂದಿಯವರ ಸಮಸ್ಯೆಗಳ ಬಗ್ಗೆ ಪರಿಶೀಲಿಸಿ ಕ್ರಮವಹಿಸುವ ಕುರಿತು:**
   ಅಡುಗೆ ಸಿಬ್ಬಂದಿಯವರ ನೇಮಕಾತಿಯು ಗ್ರಾಮ ಪಂಚಾಯತಿ ಹಂತದಲ್ಲಿ ನಡೆಯುತ್ತಿದೆ. ಆದರೆ ಎಸ್.ಡಿ.ಎಂ.ಸಿ ಬದಲಾದಾಗ ಅಡುಗೆ ಸಿಬ್ಬಂದಿಯನ್ನು ಸಹ ಬದಲಾವಣೆ ಮಾಡುತ್ತಿರುವುದಾಗಿ ಹಾಗೂ ಕೆಲಸದಿಂದ ತೆಗೆದುಹಾಕುತ್ತಿರುವುದಾಗಿ, 10-15 ವರ್ಷಗಳಿಂದ ಕೆಲಸ ಮಾಡುತ್ತಿರುವ ಅಡುಗೆಯವರ ಕಡೆಗಣನೆ, ದುರ್ವರ್ತನೆ ಮತ್ತು ಕಳ್ಳತನತದ ಆರೋಪಗಳನ್ನು ಹೊರಿಸಿ ಅವರನ್ನು ಕೆಲಸದಿಂದ ತೆಗೆದು ಹಾಕುತ್ತಿರುವುದು, ಸಂಭಾವನೆ ವಿಳಂಬವಾಗಿ ನೀಡುವುದು ಮುಂತಾದ ಸಮಸ್ಯೆಗಳನ್ನು ಎದುರಿಸುತ್ತಿರುವುದಾಗಿ ಅಡುಗೆ ಸಿಬ್ಬಂದಿಯವರ ಸಂಘಟನೆಗಳು ಸಭೆಯಲ್ಲಿ ತಿಳಿಸಿರುತ್ತಾರೆ.
   ಆದ್ದರಿಂದ ಜಿಲ್ಲಾ/ತಾಲ್ಲೂಕು ಹಂತದಲ್ಲಿ ಕುಂದುಕೊರತೆ ಸಮಿತಿಯನ್ನು ರೂಪಿಸಿ, ದೂರುಗಳನ್ನು ದಾಖಲಿಸಿ ಸಂಬಂಧಪಟ್ಟ ದೂರುಗಳ ಬಗ್ಗೆ ಆಯಾ ಜಿಲ್ಲಾ ಹಂತದಲ್ಲಿ ನಿಯಮಾನುಸಾರ ಕ್ರಮವಹಿಸುವಂತೆ ತಿಳಿಸಿದೆ. ಅಡುಗೆಯವರನ್ನು ವಿನಾಕಾರಣ ಕೆಲಸದಿಂದ ತೆಗೆಯುವಂತಿಲ್ಲ. ಎಸ್.ಡಿ.ಎಂ.ಸಿ ಹಾಗೂ ಗ್ರಾಮಪಂಚಾಯಿತಿ ವತಿಯಿಂದ ಸಕಾರಣವಿಲ್ಲದೆ ಅಡುಗೆ ಸಿಬ್ಬಂದಿಯನ್ನು ತೆಗೆಯದಂತೆ **ಕ್ಲಸ್ಟರ್ ಹಂತದಲ್ಲಿ ಸಿ.ಆರ್.ಪಿಯನ್ನು ಇತ್ಯರ್ಥಪಡಿಸುವ ಅಧಿಕಾರಿಯಾಗಿ ಹಾಗೂ ಮೇಲ್ಮನವಿಯನ್ನು ಇತ್ಯರ್ಥಪಡಿಸುವ ಅಧಿಕಾರವನ್ನು ಆಯಾ ತಾಲ್ಲೂಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ** ನೀಡಲಾಗಿದೆ. ನೌಕರರನ್ನು ತೆಗೆಯದಂತೆ ಒಂದುವೇಳೆ ಕೆಲಸದಿಂದ ತೆಗೆಯಲು ಕ್ರಮವಹಿಸಿದ್ದಲ್ಲಿ ಸಕಾರಣದೊಂದಿಗೆ ರಾಜ್ಯ ಕಛೇರಿಗೆ ಕಡ್ಡಾಯವಾಗಿ ವರದಿ ಮಾಡುವಂತೆ ತಿಳಿಸಿದೆ. ಅಡುಗೆಯವರ ಮೇಲೆ ಯಾವುದೇ ರೀತಿಯ ಶೋಷಣೆಯಾಗದಂತೆ ಹಾಗೂ ಅವರನ್ನು ಗೌರವಯುತವಾಗಿ ನಡೆಸಿಕೊಳ್ಳಲು ಸೂಚಿಸಿದೆ.

2. **ಕ್ಲಸ್ಟರ್ ಮಟ್ಟದಲ್ಲಿ ಸಭೆ ನಡೆಸುವ ಕುರಿತು :**
   ಅಡುಗೆಯ ಗುಣಮಟ್ಟ, ಸ್ವಚ್ಛತೆ, ಅಡುಗೆ ಸಿಬ್ಬಂದಿಯ ಬದ್ಧತೆಯನ್ನು ಹೆಚ್ಚಿಸಲು ಮುಖ್ಯ ಅಡುಗೆಯವರಿಗೆ ಹಾಗೂ ಸಹಾಯಕ ಅಡುಗೆಯವರಿಗೆ ಮೂರು ತಿಂಗಳಿಗೊಮ್ಮೆ ಕ್ಲಸ್ಟರ್ ಮಟ್ಟದಲ್ಲಿ ಕಡ್ಡಾಯವಾಗಿ ಸಭೆ ನಡೆಸಲು ಕ್ರಮವಹಿಸಲು ಸೂಚಿಸಿದೆ.

3. ಅಡುಗೆ ಸಿಬ್ಬಂದಿಗಳಿಗೆ ತರಬೇತಿ :
ಅಡುಗೆ ಸಿಬ್ಬಂದಿಗಳಿಗೆ ಸರಿಯಾಗಿ ತರಬೇತಿ ಮತ್ತು ನಿರ್ದೇಶನಗಳನ್ನು ನೀಡದಿರುವುದರಿಂದ ಆಗಾಗ್ಗೆ ಕೆಲವು ಜಿಲ್ಲೆಗಳಲ್ಲಿ ಕಲುಷಿತ ಬಿಸಿಯೂಟ ಸೇವಿಸಿ ಮಕ್ಕಳು ಅಸ್ವಸ್ಥಗೊಳ್ಳುವ ಘಟನೆಗಳು ಸಂಭವಿಸುತ್ತಿವೆ. ಆದ್ದರಿಂದ ಕಡ್ಡಾಯವಾಗಿ ಅಡುಗೆ ಸಿಬ್ಬಂದಿಗಳಿಗೆ ಮಾರ್ಗಸೂಚಿ, ಶುಚಿರುಚಿ ಹಾಗೂ ಎಸ್.ಓ.ಪಿ ಯಲ್ಲಿ ತಿಳಿಸಿರುವ ಅಂಶಗಳನ್ನೊಳಗೊಂಡಂತೆ ತರಬೇತಿಯನ್ನು ನೀಡಲು ತಿಳಿಸಿದೆ. ಅಡುಗೆ ಸಿಬ್ಬಂದಿಗಳಿಗೆ ತರಬೇತಿಯನ್ನು ನೀಡಿದ ನಂತರ ಕಡ್ಡಾಯವಾಗಿ ಮಾಹಿತಿಯನ್ನು ರಾಜ್ಯ ಕಛೇರಿಗೆ ಸಲ್ಲಿಸುವುದು.

4. ಯೋಜನೆಗಳಲ್ಲಿ ನೋಂದಾಯಿಸುವ ಕುರಿತು :
ಪ್ರಧಾನ ಮಂತ್ರಿ ಸುರಕ್ಷಾ ಬಿಮಾ ಯೋಜನೆ, ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಬಿಮಾ ಯೋಜನೆಗಳನ್ನು ವಿಮಾ ಕ್ಷೇತ್ರದಲ್ಲೂ ಹಾಗೂ ವೃದ್ಧಾಪ್ಯ ಆದಾಯ ಸುರಕ್ಷತೆಗಾಗಿ ಅಟಲ್ ಪಿಂಚಣಿ ಯೋಜನೆಗಳಲ್ಲಿ ನೊಂದಾಯಿಸಲು ಮತ್ತು ಈ ಯೋಜನೆಗಳ ಲಾಭ ಪಡೆದುಕೊಳ್ಳಲು ಅಡುಗೆ ಸಿಬ್ಬಂದಿಗಳಿಗೆ ಅಗತ್ಯ ಮಾಹಿತಿ, ಮಾರ್ಗದರ್ಶನ ಮತ್ತು ಪ್ರೇರೇಪಣೆ ನೀಡಲು ಸೂಚಿಸಿದೆ. ಈ ಸಂಬಂಧ ಈಗಾಗಲೇ ನೀಡಲಾಗಿರುವ ನಿಗದಿತ ನಮೂನೆಯಲ್ಲಿ ಮಾಹಿತಿಯನ್ನು ನೀಡುವಂತೆ ತಿಳಿಸಿದೆ.

5. ಬಿಸಿಯೂಟ ತಯಾರಿ ಹಾಗೂ ಕ್ಷೀರಭಾಗ್ಯ ಹಾಲು ವಿತರಣೆ :
ಶಾಲೆಗಳಲ್ಲಿ ಶೌಚಾಲಯ, ಶಾಲಾ ಕಾರಿಡಾರ್ ಸ್ವಚ್ಛತೆ, ಬೆಲ್ ಹೊಡೆಯುವ ಕೆಲಸ, ಶಿಕ್ಷಕರ/ಶಾಲಾ ಸಿಬ್ಬಂದಿಗಳ ವೈಯಕ್ತಿಕ ಕೆಲಸಗಳಿಗೆ ಅಡುಗೆ ಸಿಬ್ಬಂದಿಗಳನ್ನು ತೊಡಗಿಸಿಕೊಳ್ಳುವಂತಿಲ್ಲ ಹಾಗೂ ಬಲವಂತವಾಗಿ ಈ ಕೆಲಸಗಳನ್ನು ಅಡುಗೆ ಸಿಬ್ಬಂದಿಗಳಿಂದ ಮಾಡಿಸಿಕೊಳ್ಳದಿರುವಂತೆ ಸಂಬಂಧಿಸಿದ ಎಲ್ಲಾ ಅಧಿಕಾರಿ/ಸಿಬ್ಬಂದಿ ವರ್ಗದವರಿಗೆ ನಿರ್ದೇಶನ ನೀಡುವಂತೆ ತಿಳಿಸಿದೆ. ಅಡುಗೆ ಸಿಬ್ಬಂದಿಗಳನ್ನು ಬಿಸಿಯೂಟ ತಯಾರಿ ಹಾಗೂ ಕ್ಷೀರಭಾಗ್ಯದ ಹಾಲು ವಿತರಣೆ ಸಂಬಂಧಿತ ಕೆಲಸಗಳಲ್ಲಿ ಮಾತ್ರ ತೊಡಗಿಸಿಕೊಳ್ಳುವಂತೆ ತಿಳಿಸಿದೆ.

6. 60 ವರ್ಷ ತುಂಬಿದ ಅಡುಗೆಯವರನ್ನು ಕೆಲಸದಿಂದ ತೆಗೆಯುವ ಬಗ್ಗೆ :
ವಯಸ್ಸಾದ ಅಡುಗೆ ಸಿಬ್ಬಂದಿಗಳನ್ನು ಕೆಲಸದಿಂದ ತೆಗೆಯಲು ಯಾವುದೇ ನಿಯಮಗಳಿರುವುದಿಲ್ಲ. ಸಾಮಾನ್ಯವಾಗಿ 60 ವರ್ಷ ತುಂಬಿದ ಅಡುಗೆಯವರಿಗೆ ಬಿಸಿಯೂಟದ ಕೆಲಸಗಳನ್ನು ಮಾಡಲು ಶಕ್ತರಿಲ್ಲದ ಕಾರಣದಿಂದಾಗಿ (ಹೆಚ್ಚು ಮಕ್ಕಳಿರುವ ಶಾಲೆಗಳಲ್ಲಿ ಅಡುಗೆ ತಯಾರಿಸಲು ದೊಡ್ಡ-ದೊಡ್ಡ ಪಾತ್ರೆ ಬಳಕೆ ಮಾಡಿ ಅಡುಗೆ ತಯಾರಿಸುವುದರಿಂದ) ಅಂತಹ ಅಡುಗೆ ಸಿಬ್ಬಂದಿಗಳನ್ನು ಕೆಲಸದಿಂದ ತೆಗೆಯುವ ಸಂದರ್ಭ ಉಂಟಾದಲ್ಲಿ ಈ ಬಗ್ಗೆ ಅಡುಗೆ ಸಿಬ್ಬಂದಿ ನೇಮಕಾತಿ ಸಮಿತಿಯಲ್ಲಿ ಚರ್ಚಿಸಿ ನಿರ್ಣಯ ಕೈಗೊಂಡು ಮಾಹಿತಿಯನ್ನು ಜಿಲ್ಲಾ/ತಾಲ್ಲೂಕು ಪಂಚಾಯತ್, ಅಕ್ಷರ ದಾಸೋಹ ಅಧಿಕಾರಿಗಳ ಗಮನಕ್ಕೆ ತರುವಂತೆ ತಿಳಿಸಿದೆ.

ಮೇಲ್ಕಂಡ ಅಂಶಗಳ ಬಗ್ಗೆ ತುರ್ತಾಗಿ ಕ್ರಮಕೈಗೊಂಡು ಈ ಕಛೇರಿಗೆ ವರದಿ ಮಾಡಲು ತಿಳಿಸಿದೆ.

28/1/18

(ಎಂ.ಆರ್.ಮಾರುತಿ)
ಜಂಟಿ ನಿರ್ದೇಶಕರು
ಮಧ್ಯಾಹ್ನ ಉಪಹಾರ ಯೋಜನೆ

ಗೆ,

1. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ.
2. ರಾಜ್ಯದ ಎಲ್ಲಾ ಜಿಲ್ಲೆಗಳ ಶಿಕ್ಷಣಾಧಿಕಾರಿಗಳು, ಅಕ್ಷರ ದಾಸೋಹ, ಜಿಲ್ಲಾ ಪಂಚಾಯತ್ ಕಛೇರಿ.
3. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ.
4. ರಾಜ್ಯದ ಎಲ್ಲಾ ತಾಲ್ಲೂಕುಗಳ ಸಹಾಯಕ ನಿರ್ದೇಶಕರು, ಅಕ್ಷರ ದಾಸೋಹ, ತಾಲ್ಲೂಕು ಪಂಚಾಯತ್ ಕಛೇರಿ.

ಪ್ರತಿಯನ್ನು :

1. ಗೌರವಗಳೊಂದಿಗೆ ರಾಜ್ಯದ ಎಲ್ಲಾ ಜಿಲ್ಲೆಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಕಛೇರಿ ಪ್ರತಿ.